2ನೇ ಹೆಚ್ಚುವರಿ **ಸಿವಿಲ್ ದಂಡಾಧಿಕಾರಿಯವರ ನ್ಯಾಯಾಲಯ ಚನ್ನಗಿರಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ:2669/2024**

ಪಿರ್ಯಾದುದಾರರು : ವಿರುದ್ಧ ಆರೋಪಿತರು:

ಸಂತೇಬೆನ್ನೂರು ಪೊಲೀಸ್ ಠಾಣೆ

ಎ.1. ಧನಂಜಯ ಬಿನ್ ನಿಂಗಪ್ಪ
ವಯಸ್ಸುಃ 44 ವರ್ಷ,
ಎ.2. ಸುಧಾ ಕೋಂ ಧನಂಜಯ
ವಯಸ್ಸುಃ 39 ವರ್ಷ,
ಇಬ್ಬರ ವಾಸಃ ಕೆಂಪನಹಳ್ಳಿ ಗ್ರಾಮ,
ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ.

**ದೋಷಾರೋಪಣೆ**

**ಶ್ರೀಮತಿ ಮಹಾಲಕ್ಷ್ಮೀ ಜಿ 2**ನೇ ಹೆಚ್ಚುವರಿ ಸಿವಿಲ್.ನ್ಯಾ.ದಂಡಾಧಿಕಾರಿ, ಚನ್ನಗಿರಿ ಈ ಮೂಲಕ ನಿಮ್ಮ ಮೇಲೆ ಅಪಾಧಿಸುವುದೇನೆಂದರೆ ಆರೋಪಿತರಾದ ನೀವು:-

ಮೊದಲನೆಯದಾಗಿ 17-03-2024 ರಂದು ಸಂಜೆ 5.00 ಗಂಟೆ ಸಮಯದಲ್ಲಿ ಕೆಂಪನಹಳ್ಳಿ ಗ್ರಾಮದಲ್ಲಿ ಚಾಸಾ-1 ರವರ ಮನೆಯ ಮುಂದಿನ ಜಾಗದಲ್ಲಿ ನೀರು ಹಾಕಿದ ವಿಚಾರದಲ್ಲಿ 1 ನೇ ಆರೋಪಿಯ ಚಾಸಾ-4 ರವರಿಗೆ ಸೂಳೆಮಕ್ಕಳಾ ಯಾವನೋ ನೀರು ಹಾಕಿದ್ದು ಎಂದು ಬೈದಾಡಿದ್ದು ಚಾಸಾ-1 ರವರ ಯಾಕೆ ನಮಗೆ ಬೈಯುತ್ತೀಯ ಎಂದು ಕೇಳಿದ್ದಕ್ಕೆ 1 ನೇ ಅರೋಪಿಯಾದ ನೀನು ಏ ಬೋಸೂಡಿ ಮುಂಡೆ ಅಂತ ಅವಾಚ್ಯ ಶಬ್ದಗಳಿಂದ ಬೈಯ್ದು ಭಾ.ದಂ.ಸಂ.ಕಲಂ 504 ಸಹ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಎರಡನೆಯದಾಗಿ ಮೇಲೆ ಹೇಳಿದ ಸ್ಥಳ, ಸಮಯ, ದಿನಾಂಕದಂದು ಆರೋಪಿತರಾದ ನೀವು ಚಾಸಾ-1 ರವರಿಗೆ ಬೈಯ್ದು ಜಗಳ ಮಾಡುತ್ತಿರುವಾಗ ಜಗಳ ಬಿಡಿಸಲು ಬಂದ ಚಾಸಾ-4 ರವರಿಗೆ ಅಲ್ಲೆ ಇದ್ದ ತೆಂಗಿನ ಮಟ್ಟೆಯಿಂದ ಎಡಗೈಗೆ ಬೆನ್ನಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು ಮತ್ತು ಚಾಸಾ-1 ರವರಿಗೇ ಅದೇ ತೆಂಗಿನಮಟ್ಟೆಯಿಂದ ತಲೆಗೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡುವ ಮೂಲಕ ಭಾ.ದಂ.ಸಂ.ಕಲಂ 324 ರ ಸಹ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಕೊನೆಯದಾಗಿ ಮೇಲೆ ಹೇಳಿದ ಸ್ಥಳ, ಸಮಯ, ದಿನಾಂಕದಂದು 1 ಮತ್ತು 2 ನೇ ಆರೋಪಿತರಾದ ನೀವು ಚಾಸಾ.1 ಮತ್ತು 4 ರವರಿಗೆ ನೀವು ನಮ್ಮ ನಿಮ್ಮನ್ನು ಜೀವ ಸಹಿತ ಬಿಡುವುದಿಲ್ಲ ಕೊಲೆ ಮಾಡುತ್ತೇವೆ ಎಂದು ಪ್ರಾಣ ಬೆದರಿಕೆ ಹಾಕುವ ಮೂಲಕ ಭಾ.ದಂ.ಸಂ.ಕಲಂ 506 ರ ಸಹ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

(ಮೇಲೆ ಹೇಳಿದ ಆರೋಪಗಳ ಮೇಲೆ ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಿರುತ್ತೀರಾ ಎಂದು ನಿರ್ದೇಶಿಸಿದ್ದೇನೆ)

ದಿನಾಂಕ: 07-04-2025

**(ಶ್ರೀಮತಿ ಮಹಾಲಕ್ಷ್ಮೀ ಜಿ )**
**2ನೇ ಹೆಚ್ಚುವರಿ ಪ್ರ.ದ.ನ್ಯಾ ,**
**ದಂಡಾಧಿಕಾರಿ, ಚನ್ನಗಿರಿ.**

**2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ಚನ್ನಗಿರಿ,**

**ನ್ಯಾಯಾಲಯದಲ್ಲಿ**

**<u>ಸಿಸಿ ನಂ:2</u>669/2024**

**1. ಕರ್ನಾಟಕ ಸರ್ಕಾರ (ಸಂತೇಬೆನ್ನೂರು ಪಿ.ಎಸ್ )**

**ವಿರುದ್ಧ**

ಎ.1. ಧನಂಜಯ ಬಿನ್ ನಿಂಗಪ್ಪ
ವಯಸ್ಸುಃ 44 ವರ್ಷ,
ವಾಸಃ ಕೆಂಪನಹಳ್ಳಿ ಗ್ರಾಮ,
ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ.

## ಆರೋಪಿಯ ಹೇಳಿಕೆ

1. ಈಗ ಓದಿ ಹೇಳಿದ ನಿನ್ನ ಮೇಲಿನ ಆಪಾದೆನೆಯನ್ನು ಕೇಳಿದ್ದಿಯಾ? ತಿಳಿಯಿತೇ?

ಉತ್ತರಃ

2. ಸದರಿ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆಯಾಗಬೇಕೋ?

ಉತ್ತರಃ

(ಆರೋಪಿತಳಿಗೆ ಆರೋಪಣೆಯ ಸಾರಾಂಶವನ್ನು ದಿನಾಂಕ 27-03-2025 ರಂದು ತೆರೆದ ನ್ಯಾಯಾಲಯದಲ್ಲಿ ಓದಿ ಕೇಳಿ ಅವನುಃಳು ಕೊಟ್ಟ ಉತ್ತರವನ್ನು ಬರೆದುಕೊಳ್ಳಲಾಯಿತು.)

ದಿನಾಂಕ: 27-03-2025

**(ಶ್ರೀಮತಿ ಮಹಾಲಕ್ಷ್ಮೀ ಜಿ )**
**2ನೇ ಹೆಚ್ಚುವರಿ ಪ್ರ.ದ.ನ್ಯಾ ,**
**ದಂಡಾಧಿಕಾರಿ, ಚನ್ನಗಿರಿ.**